# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ಕಛೇರಿ, ಚಾಮರಾಜನಗರ

## ಅಧಿಸೂಚನೆ ಸಂಖ್ಯೆ. ಎಡಿಎಮ್‌ಎನ್ / 01 /2018

## ದಿನಾಂಕ: 30.10.2018

ವಿಷಯ: ಚಾಮರಾಜನಗರ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರ, ಬೆರಳಚ್ಚುಗಾರರ, ನಕಲು ಬೆರಳಚ್ಚುಗಾರರ, ಆದೇಶ ಜಾರಿಕಾರ ಮತ್ತು ಸೇವಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ: 1. ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ಅನುಮತಿ ಪತ್ರ ಸಂಖ್ಯೆ: **LCA-II-128/2012, ದಿ: 02.08.2017.**

2. ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ಅನುಮತಿ ಪತ್ರ ಸಂಖ್ಯೆ: **LCA-II-128/2012, ದಿ: 18.09.2018.**

3. ದಿನಾಂಕ: 30.10.2018 ರ ಈ ಕಛೇರಿ ಟಿಪ್ಪಣಿ ಮೇಲಿನ ಆದೇಶ.

-------------

ಮೇಲ್ಕಂಡ ಅಧಿಸೂಚನೆಯನ್ವಯ ಚಾಮರಾಜನಗರದ ಜಿಲ್ಲಾ ನ್ಯಾಯಾಂಗ ಘಟಕದ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರ 06 ಹುದ್ದೆಗಳಿಗೆ ( 3 ಹಿಂಬಾಕಿ ಹುದ್ದೆಗಳು + 3 ಹುದ್ದೆಗಳು), ಬೆರಳಚ್ಚುಗಾರರ 01 ಹಿಂಬಾಕಿ ಹುದ್ದೆಗೆ, ಬೆರಳಚ್ಚು - ನಕಲುಗಾರರ 03 ಹುದ್ದೆಗಳಿಗೆ (2 ಹಿಂಬಾಕಿ ಹುದ್ದೆಗಳು + 1ಹುದ್ದೆ), ಆದೇಶ ಜಾರಿಕಾರರು 02 ಹುದ್ದೆಗಳಿಗೆ ಹಾಗೂ ಸೇವಕರ 07 ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ನಿಗದಿಪಡಿಸಿದ ಅರ್ಜಿ ನಮೂನೆಯ ಬೆರಳಚ್ಚು ಪ್ರತಿ / ಗಣಕೀಕೃತ ಪ್ರತಿಯಲ್ಲಿಯೇ ಅಭ್ಯರ್ಥಿಗಳು ತಮ್ಮ ಸ್ವಂತ ಕೈಬರಹದಿಂದ ಎಲ್ಲಾ ಅಂಕಣಗಳನ್ನು ಜಾಗರೂಕತೆಯಿಂದ ಭರ್ತಿ ಮಾಡಿ, ಸಂಬಂಧ ಪಟ್ಟ ದಾಖಲೆಗಳ ಸ್ವಯಂ ದೃಢೀಕೃತ ನಕಲು ಪ್ರತಿಗಳೊಡನೆ ದಿನಾಂಕ: **05.12.2018** ರಂದು ಸಂಜೆ **05.00** ಘಂಟೆಯೊಳಗೆ ಈ ಕಛೇರಿಗೆ ಸಲ್ಲಿಸತಕ್ಕದ್ದು.

ಅರ್ಜಿ ಸಲ್ಲಿಸಬೇಕಾದ ವಿಳಾಸ : ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಚಾಮರಾಜನಗರ.

◆ ಅಧಿಸೂಚನೆಗೆ ಸಂಬಂಧಪಟ್ಟ ಮಾಹಿತಿ ಹಾಗೂ ಅರ್ಜಿ ನಮೂನೆಯು ಚಾಮರಾಜನಗರ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ http://ecourts.gov.in/chamarajanagar ನಲ್ಲಿ ಲಭ್ಯವಿರುತ್ತದೆ.

# 1. ಹುದ್ದೆಯ ಪದನಾಮ : ಶೀಘ್ರಲಿಪಿಗಾರರು

a. ಖಾಲಿ ಹುದ್ದೆಗಳ ಸಂಖ್ಯೆ : 06 ಹುದ್ದೆಗಳು (3 ಹಿಂಬಾಕಿ ಹುದ್ದೆಗಳು + 3 ಹುದ್ದೆಗಳು)

b. ವೇತನ ಶ್ರೇಣಿ : 27650-650-29600-750-32600-850-36000-950-39800-1100-46400-1250- 52650/-

| | | |
|---|---|---|
| 1. | ಪ್ರವರ್ಗ - IIIB (ಇತರೆ) | 1 ಹುದ್ದೆ (ಹಿಂಬಾಕಿ) |
| 2. | ಸಾಮಾನ್ಯ ವರ್ಗ (ಮಾಜಿ ಸೈನಿಕ) | 1 ಹುದ್ದೆ (ಹಿಂಬಾಕಿ) |
| 3. | ಪ್ರವರ್ಗ – II(ಎ) (ಗ್ರಾಮೀಣ) | 1 ಹುದ್ದೆ (ಹಿಂಬಾಕಿ) |
| 4. | ಪರಿಶಿಷ್ಟ ಜಾತಿ (ಅಂಗವಿಕಲ)* | 1 ಹುದ್ದೆ |
| 5. | ಸಾಮಾನ್ಯ ವರ್ಗ (ಮಹಿಳೆ) | 1 ಹುದ್ದೆ |
| 6. | ಪ್ರವರ್ಗ – II(ಎ) (ಅಂಗವಿಕಲ)* | 1 ಹುದ್ದೆ |
| | ಒಟ್ಟು | 6 ಹುದ್ದೆಗಳು |

* ದೃಷ್ಟಿಮಾಂದ್ಯ ಅಂಗವಿಕಲ ಅಭ್ಯರ್ಥಿ ( ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 128 ಸೇನೆನಿ 2006 ಬೆಂಗಳೂರು, ದಿನಾಂಕ 01.08.2009 ರಲ್ಲಿ ನಿಗದಿಪಡಿಸಿರುವಂತೆ).

*ಶೈಕ್ಷಣಿಕ ವಿದ್ಯಾರ್ಹತೆ:*

೧. ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

೨. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಕನ್ನಡ ಮತ್ತು ಆಂಗ್ಲ ಭಾಷೆ, ಈ ಎರಡು ಭಾಷೆಗಳ ಹಿರಿಯ ದರ್ಜೆ (senior grade) ಬೆರಳಚ್ಚು ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು.

೩. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಕನ್ನಡ ಮತ್ತು ಆಂಗ್ಲ ಭಾಷೆ, ಈ ಎರಡು ಭಾಷೆಗಳ ಹಿರಿಯ ದರ್ಜೆ (senior grade) ಶೀಘ್ರಲಿಪಿ ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು.

# II. ಹುದ್ದೆಯ ಪದನಾಮ : ಬೆರಳಚ್ಚುಗಾರರು

a. ಖಾಲಿ ಹುದ್ದೆಗಳ ಸಂಖ್ಯೆ : 01 ಹಿಂಬಾಕಿ ಹುದ್ದೆ

b. ವೇತನ ಶ್ರೇಣಿ : 21400-500-22400-550-24600-600-27000-650-29600-750-32600-850-36000-950-39800-1100-42000/-

| | | |
|---|---|---|
| 1. | ಸಾಮಾನ್ಯ ವರ್ಗ (ಯೋಜನಾ ನಿರಾಶ್ರಿತರು) | 1 ಹುದ್ದೆ (ಹಿಂಬಾಕಿ) |

*ಶೈಕ್ಷಣಿಕ ವಿದ್ಯಾರ್ಹತೆ:*

೧. ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

೨. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಕನ್ನಡ ಮತ್ತು ಆಂಗ್ಲ ಭಾಷೆ, ಈ ಎರಡು ಭಾಷೆಗಳ ಹಿರಿಯ ದರ್ಜೆ ( Senior Grade) ಬೆರಳಚ್ಚು ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು.

## III. ಹುದ್ದೆಯ ಪದನಾಮ : ಬೆರಳಚ್ಚು - ನಕಲುಗಾರರು

a. ಖಾಲಿ ಹುದ್ದೆಗಳ ಸಂಖ್ಯೆ : 03 ಹುದ್ದೆಗಳು (02 ಹಿಂಬಾಕಿ ಹುದ್ದೆಗಳು + 01 ಹುದ್ದೆ)

b. ವೇತನ ಶ್ರೇಣಿ : 21400-500-22400-550-24600-600-27000-650-29600-750-32600-850-36000-950-39800-1100-42000/-

| | | |
|---|---|---|
| 1. | ಸಾಮಾನ್ಯ ವರ್ಗ (ಮಾಜಿ ಸೈನಿಕ) | 1 ಹುದ್ದೆ (ಹಿಂಬಾಕಿ) |
| 2. | ಪ್ರವರ್ಗ – II(ಎ) (ಗ್ರಾಮೀಣ) | 1 ಹುದ್ದೆ (ಹಿಂಬಾಕಿ) |
| 3. | ಪರಿಶಿಷ್ಟ ಜಾತಿ (ಅಂಗವಿಕಲ)* | 1 ಹುದ್ದೆ |
| | ಒಟ್ಟು | 3 ಹುದ್ದೆಗಳು |

* ದೃಷ್ಟಿಮಾಂದ್ಯ ಅಂಗವಿಕಲ ಅಭ್ಯರ್ಥಿ ( ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 128 ಸೇನೆನಿ 2006 ಬೆಂಗಳೂರು, ದಿನಾಂಕ 01.08.2009 ರಲ್ಲಿ ನಿಗದಿಪಡಿಸಿರುವಂತೆ).

**ಶೈಕ್ಷಣಿಕ ವಿದ್ಯಾರ್ಹತೆ:**

೧. ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

೨. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಕನ್ನಡ ಮತ್ತು ಆಂಗ್ಲ ಭಾಷೆ, ಈ ಎರಡು ಭಾಷೆಗಳ ಕಿರಿಯ ದರ್ಜೆ (Junior Grade) ಬೆರಳಚ್ಚು ವಿಷಯಗಳಲ್ಲಿ ತೇರ್ಗಡೆ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು.

## IV. ಹುದ್ದೆಯ ಪದನಾಮ : ಆದೇಶ ಜಾರಿಕಾರರು

a. ಖಾಲಿ ಹುದ್ದೆಗಳ ಸಂಖ್ಯೆ : 02 ಹುದ್ದೆಗಳು

b. ವೇತನ ಶ್ರೇಣಿ : 19950-450-20400-500-22400-550-24600-600-27000-650-29600-750- 32600-850- 36000- 950-37900/-

| | | |
|---|---|---|
| 1. | ಪ್ರವರ್ಗ – II(ಎ) (ಅಂಗವಿಕಲ)* | 1 ಹುದ್ದೆ |
| 2. | ಸಾಮಾನ್ಯ ವರ್ಗ (ಗ್ರಾಮೀಣ) | 1 ಹುದ್ದೆ |
| | ಒಟ್ಟು | 2 ಹುದ್ದೆಗಳು |

* ದೃಷ್ಟಿಮಾಂದ್ಯ ಅಂಗವಿಕಲ ಅಭ್ಯರ್ಥಿ ( ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 128 ಸೇನೆನಿ 2006 ಬೆಂಗಳೂರು, ದಿನಾಂಕ 01.08.2009 ರಲ್ಲಿ ನಿಗದಿಪಡಿಸಿರುವಂತೆ).

**ಶೈಕ್ಷಣಿಕ ವಿದ್ಯಾರ್ಹತೆ:**

೧. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು.

೨. ಡ್ರೈವಿಂಗ್ ಲೈಸೆನ್ಸ್‌ನ್ನು ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

೩. ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು.

## 5. ಹುದ್ದೆಯ ಪದನಾಮ : ಸೇವಕರು

a. ಖಾಲಿ ಹುದ್ದೆಗಳ ಸಂಖ್ಯೆ : 07 ಹುದ್ದೆಗಳು

b. ವೇತನ ಶ್ರೇಣಿ : 17000-400-18600-450-20400-500-22400-550-24600-600-27000-650- 28950/-

| | | |
|---|---|---|
| 1. | ಸಾಮಾನ್ಯ ವರ್ಗ (ಅಂಗವಿಕಲ)* | 1 ಹುದ್ದೆ |
| 2. | ಪರಿಶಿಷ್ಟ ಜಾತಿ (ಮಹಿಳೆ) | 1 ಹುದ್ದೆ |
| 3. | ಸಾಮಾನ್ಯ ವರ್ಗ (ಮಹಿಳೆ) | 1 ಹುದ್ದೆ |
| 4. | ಪ್ರವರ್ಗ – II(ಎ) (ಮಹಿಳೆ) | 1 ಹುದ್ದೆ |
| 5. | ಸಾಮಾನ್ಯ ವರ್ಗ (ಗ್ರಾಮೀಣ) | 1 ಹುದ್ದೆ |
| 6. | ಪರಿಶಿಷ್ಟ ಜಾತಿ (ಗ್ರಾಮೀಣ) | 1 ಹುದ್ದೆ |
| 7. | ಸಾಮಾನ್ಯ ವರ್ಗ (ಇತರೆ) | 1 ಹುದ್ದೆ |
| | ಒಟ್ಟು | 7 ಹುದ್ದೆಗಳು |

* ದೃಷ್ಟಿಮಾಂದ್ಯ ಅಂಗವಿಕಲ ಅಭ್ಯರ್ಥಿ ( ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 128 ಸೆನೆನಿ 2006 ಬೆಂಗಳೂರು, ದಿನಾಂಕ 01.08.2009 ರಲ್ಲಿ ನಿಗದಿಪಡಿಸಿರುವಂತೆ).

ಶೈಕ್ಷಣಿಕ ವಿದ್ಯಾರ್ಹತೆ:

೧. 7ನೇ ತರಗತಿ ಪರೀಕ್ಷೆಯಲ್ಲಿ ಉತ್ತೀರ್ಣತೆ.

೨. ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು.

ವಿಶೇಷ ಸೂಚನೆ: ೧. 7ನೇ ತರಗತಿಯ ಅಂಕಗಳು ಶ್ರೇಣಿಯಲಿದ್ದರೆ (ಗ್ರೇಡ್) ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು ಮತ್ತು ಪಡೆದ ಅಂಕಗಳ ಒಟ್ಟು ಶೇಕಡಾವಾರು ನಮೂದು ಇರುವ ಅಂಕಪಟ್ಟಿಯನ್ನು ಕಡ್ಡಾಯವಾಗಿ ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು ಹಾಗೂ ಅಂಕಪಟ್ಟಿಯಲ್ಲಿ ತ್ರೈಮಾಸಿಕ ಅಂಕಗಳಿದ್ದರೆ ಎಲ್ಲಾ ತ್ರೈಮಾಸಿಕ ಅಂಕಗಳನ್ನು ಕ್ರೋಢೀಕರಿಸಿದ ಅಂಕಪಟ್ಟಿಯ ಅಂಕಗಳನ್ನು ಅರ್ಜಿ ನಮೂನೆಯಲ್ಲಿ ನಮೂದಿಸತಕ್ಕದ್ದು ಹಾಗೂ ಅಂಕಪಟ್ಟಿಯು ಕಡ್ಡಾಯವಾಗಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ದೃಢೀಕರಿಸಲ್ಪಟ್ಟಿರತಕ್ಕದ್ದು ಮತ್ತು ಸದರಿ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ದೃಢೀಕರಿಸಲ್ಪಟ್ಟ ಅಂಕಪಟ್ಟಿಯನ್ನು ಸಂದರ್ಶನದ ಸಮಯದಲ್ಲಿ ತಪ್ಪದೇ ಹಾಜರು ಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

೨. ಮೇಲ್ಕಾಣಿಸಿದ 7ನೇ ತರಗತಿಯ ಅಂಕಪಟ್ಟಿಯು ಈ ಅಧಿಸೂಚನೆಯಲ್ಲಿ ನಮೂದಿಸಿದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು.

ಳ. ಮೇಲ್ಕಾಣಿಸಿದ 7ನೇ ತರಗತಿಯ ಅಂಕಗಳನ್ನೊಳಗೊಂಡ ಅಂಕಪಟ್ಟಿಯಾಗಿರಬೇಕು ಮತ್ತು ಬೇರೆ ರೀತಿಯಲ್ಲಿ ಅಂದರೆ ಗ್ರೇಡ್‌ಗಳಲ್ಲಿ ಇದ್ದ ಅಂಕಪಟ್ಟಿಗಳನ್ನು ಲಗತ್ತಿಸಿದರೆ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಱ. 7ನೇ ತರಗತಿಯ ಅಂಕಗಳನ್ನೊಳಗೊಂಡ ಅಂಕಪಟ್ಟಿಯು ಸಂಬಂಧಿಸಿದ ಮುಖ್ಯೋಪಾಧ್ಯಾಯಾರಿಂದ ಸಹಿ ಹಾಗೂ ಶಾಲೆಯ ಮೊಹರನ್ನು ಹಾಕಿಸಿಕೊಂಡಿರಬೇಕು ಮತ್ತು ಆ ಅಂಕಪಟ್ಟಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಯ ಮೇಲುರುಜುವನ್ನು ಕಡ್ಡಾಯವಾಗಿ ಪಡೆದಿರಬೇಕು. ಹಾಗೇ ಇಲ್ಲದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಮೇಲ್ಕಂಡ ಎಲ್ಲಾ ಹುದ್ದೆಗಳನ್ನು ಕರ್ನಾಟಕ ಅಧೀನ ನ್ಯಾಯಾಲಯಗಳು ( ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ)ನಿಯಮಗಳು 1982 ಮತ್ತು ಕರ್ನಾಟಕ ಅಧೀನ ನ್ಯಾಯಾಲಯಗಳು ( ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು 2007ರ ಅನ್ವಯ ನೇರನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು.

| ನೇಮಕಾತಿ ವಿಧಾನ | | |
|---|---|---|
| 1. | ಶೀಘ್ರಲಿಪಿಗಾರ | ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಒಂದು ನಿಮಿಷಕ್ಕೆ 120 ಪದಗಳ ದರದಲ್ಲಿ 5 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು 45 ನಿಮಿಷಗಳಲ್ಲಿ ಅನುಲಿಪಿ ಮಾಡುವ "ಸಾಮರ್ಥ್ಯ ಪರೀಕ್ಷೆ" ಯಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ 1 : 5 ಅನುಪಾತದಲ್ಲಿ ಸಂದರ್ಶನ ನಡೆಸಲಾಗುವುದು |
| 2. | ಬೆರಳಚ್ಚುಗಾರ ಮತ್ತು ಬೆರಳಚ್ಚು - ನಕಲುಗಾರ | ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ "ಸಾಮರ್ಥ್ಯ ಪರೀಕ್ಷೆ" ಯಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ 1 : 5 ಅನುಪಾತದಲ್ಲಿ ಸಂದರ್ಶನ ನಡೆಸಲಾಗುವುದು |
| 3. | ಆದೇಶ ಜಾರಿಕಾರರು | ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ 1 : 25 ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು |

| | | |
|---|---|---|
| 4. | ಸೇವಕ | 7 ನೇ ತರಗತಿಯಲ್ಲಿ ಪಡೆದ ಗರಿಷ್ಟ ಅಂಕಗಳ ಅರ್ಹತೆಯ ಆಧಾರದ ಮೇಲೆ 1 : 10 ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು |

| ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ |
|---|
| ಶೀಘ್ರಲಿಪಿಗಾರ, ಬೆರಳಚ್ಚುಗಾರ ಮತ್ತು ಬೆರಳಚ್ಚು - ನಕಲುಗಾರ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 43 ಸೇನೀನಿ 2008, ಬೆಂಗಳೂರು, ದಿನಾಂಕ: 07.03.2012 ರಂತೆ ಹಾಗೂ ಕರ್ನಾಟಕ ಸರ್ಕಾರದ ತಿದ್ದುಪಡಿ ಅಧಿಸೂಚನೆ ಸಂಖ್ಯೆ: DPAR 59 SCR 2012, Bangalore, ದಿ: 06.08.2012 ಹಾಗೂ ತಿದ್ದುಪಡಿ ಅಧಿಸೂಚನೆ ಸಂಖ್ಯೆ: DPAR 154 SCR 2014, Bangalore, ದಿ: 27.04.2015 ಗಳನ್ವಯ ಅಭ್ಯರ್ಥಿಗಳು ಪರಿವೀಕ್ಷಣಾ ಅವಧಿಯು ಮುಗಿಯುವುದರೊಳಗಾಗಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಕನಿಷ್ಠ ಶೇ. 60 ರಷ್ಟು ಅಂಕಗಳನ್ನು ಗಳಿಸಿ ಉತ್ತೀರ್ಣರಾಗತಕ್ಕದ್ದು, ಇಲ್ಲವಾದಲ್ಲಿ ಅವರ ನೇಮಕಾತಿಯನ್ನು ರದ್ದುಪಡಿಸಲಾಗುವುದು. |

**ಮೀಸಲಾತಿ ವಿವರಣೆ:**

೧. ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿದ ವರ್ಗೀಕರಣಕ್ಕನುಸಾರವಾಗಿ ಅರ್ಹ ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ ಯೋಜನಾ ನಿರಾಶ್ರಿತ ಅಭ್ಯರ್ಥಿಗಳ ಮೀಸಲಾತಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು, ಆಯಾ ಪಂಗಡಗಳಲ್ಲಿ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದೇ ಇದ್ದಲ್ಲಿ ಆ ಸ್ಥಾನಗಳನ್ನು ಮುಂದಿನ ನೇಮಕಾತಿಗೆ ಕೊಂಡೊಯ್ಯಲಾಗುವುದು.

೨. ಒಂದು ವೇಳೆ ಅಧಿಸೂಚನೆಯಲ್ಲಿ ನಮೂದಿಸಿದ ವರ್ಗೀಕರಣಕ್ಕನುಸಾರವಾಗಿ ಅರ್ಹ ಅಂಗವಿಕಲ ಅಭ್ಯರ್ಥಿಗಳು (ದೃಷ್ಟಿ ಮಾಂದ್ಯ, ದೃಷ್ಟಿ ದೋಷ) ಲಭ್ಯವಾಗದೇ ಇದ್ದಲ್ಲಿ ಆ ಸ್ಥಾನಗಳನ್ನು ಮುಂದಿನ ನೇಮಕಾತಿಗೆ ಕೊಂಡೊಯ್ಯಲಾಗುವುದು.

**ಪರಿವೀಕ್ಷಣಾ ಅವಧಿ :**

ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕಾತಿ ನಿಯಮಗಳಂತೆ 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿಡಲಾಗುವುದು. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ, ಕನ್ನಡ ಭಾಷಾ ಪರೀಕ್ಷೆಯಲ್ಲಿ ಹಾಗೂ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗತಕ್ಕದ್ದು.

## ವಯೋಮಿತಿ :

1) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಮತ್ತು ಗರಿಷ್ಠ ವಯಸ್ಸನ್ನು ಮೀರಿರಕೂಡದು.

i) ಗರಿಷ್ಠ ವಯೋಮಿತಿ :

| | |
|---|---|
| ಸಾಮಾನ್ಯ ವರ್ಗ | 35 ವರ್ಷ ಮೀರಿರಬಾರದು |
| ಪ್ರವರ್ಗ 2ಎ, 2ಬಿ, 3ಎ, 3ಬಿ | 38 ವರ್ಷ ಮೀರಿರಬಾರದು |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ / ಪ್ರವರ್ಗ – 1 | 40 ವರ್ಷ ಮೀರಿರಬಾರದು |

ii) ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ, ಜೀತ ಕಾರ್ಮಿಕರಿಗೆ ಹಾಗೂ ಅಂಗವಿಕಲರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು (ಈ ಬಗ್ಗೆ ಮೀಸಲಾತಿ ಕೋರಿದಲ್ಲಿ ನಿಗದಿ ಪಡಿಸಿದ ಪ್ರಮಾಣಪತ್ರ ಸಲ್ಲಿಸಬೇಕು).

2) ಜನ್ಮ ದಿನಾಂಕವನ್ನು ನಮೂದಿಸಿರುವ 7 ನೇ ತರಗತಿ ಅಂಕಪಟ್ಟಿ / ವರ್ಗಾವಣೆ ಪ್ರಮಾಣ ಪತ್ರ/ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗದ ಪ್ರತಿ ಸಲ್ಲಿಸಬೇಕು.

3) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು, ನಮೂನೆ-ಡಿ ಯಲ್ಲಿ, ಪ್ರವರ್ಗ -1ರ ಅರ್ಭರ್ಥಿಗಳು ನಮೂನೆ-ಇ ಯಲ್ಲಿ ಮತ್ತು ಪ್ರವರ್ಗ-2ಎ, 2ಬಿ, 3ಎ, 3ಬಿ, ಗೆ ಸೇರಿದ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿಸಿದ ತಹಸೀಲ್ದಾರವರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆದು ಸಲ್ಲಿಸಬೇಕು. (ಮೀಸಲಾತಿ ಕೋರಿದ್ದಲ್ಲಿ)

4) ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅಭ್ಯರ್ಥಿಗಳು ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆಗನುಗುಣವಾಗಿ, ಸಂಬಂಧಿತ ಶಾಲಾ ಮುಖ್ಯೋಪಾಧ್ಯಾಯರಿಂದ ಪ್ರಮಾಣ ಪತ್ರ ಪಡೆದು, ಕ್ಷೇತ್ರ ಶಿಕ್ಷಣಾಧಿಕಾರಿಗಳವರಿಂದ ಮೇಲುರುಜು ಮಾಡಿಸಿ ಅರ್ಜಿಯೊಡನೆ ಲಗತ್ತಿಸುವುದು.

5) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 96/ ಸೇನನಿ /2005 ದಿನಾಂಕ 10.08.2005ರ ಪ್ರಕಾರ ನಿಗದಿತ ನಮೂನೆ -2 ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುಸಹಿ ಮಾಡಿಸಿ ಸಲ್ಲಿಸಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹಗೊಂಡಿರುತ್ತಾರೆ.

6) ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2ರ ಜೊತೆ ನಮೂನೆ –1 ರಲ್ಲೂ (Income Certificate) ಸಹ ದೃಢೀಕೃತ ಪತ್ರವನ್ನು ಸಲ್ಲಿಸುವುದು.

7) ಮಾಜಿ ಸೈನಿಕರು ಮೀಸಲಾತಿ ಕೋರಿದಲ್ಲಿ ಸೈನಿಕ ಸೇವೆಯಿಂದ ಬಿಡುಗಡೆಯಾದ/ವಿಮುಕ್ತಿ ಹೊಂದಿದ ಬಗ್ಗೆ ಪ್ರಮಾಣ ಪತ್ರ ಸಲ್ಲಿಸುವುದು.

8) ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು, ಸರ್ಕಾರದ ಆದೇಶದಂತೆ ನಿಗದಿತ ನಮೂನೆಯಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.

9) i) ಅಂತಿಮವಾಗಿ ವ್ಯಾಸಂಗ ಮಾಡಿದ ಶಾಲಾ /ಕಾಲೇಜಿನ ಮುಖ್ಯೋಪಾಧ್ಯಾಯರು/ ಪ್ರಾಂಶುಪಾಲರಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರದ ಪ್ರತಿಯನ್ನು ಸಲ್ಲಿಸಬೇಕು.

ii) ತಮ್ಮ ಸಂಬಂಧಿಕರಲ್ಲದ ಇಬ್ಬರು ಸ್ಥಳೀಯ ಗಣ್ಯ ವ್ಯಕ್ತಿಗಳಿಂದ ಪಡೆದ 6 ತಿಂಗಳ ಇತ್ತೀಚಿನ ಎರಡು ನಡತೆ ಪ್ರಮಾಣ ಪತ್ರಗಳ ಪ್ರತಿ ಸಲ್ಲಿಸಬೇಕು. (ಗಣ್ಯ ವ್ಯಕ್ತಿಗಳ ರುಜುವಿನಡಿಯಲ್ಲಿ ದಿನಾಂಕದೊಡನೆ ಹೆಸರು ಮತ್ತು ಮೊಹರು ಕಡ್ಡಾಯವಾಗಿ ಇರತಕ್ಕದ್ದು)

10) ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ **19.11.2005**ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ / **115**/ ಸೇನೆನಿ / **2005**ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರದ ಪ್ರತಿಯನ್ನು ಸಲ್ಲಿಸಬೇಕು.

## ಅಭ್ಯರ್ಥಿಗಳಿಗೆ ಸೂಚನೆ :

1. ಅಭ್ಯರ್ಥಿಯು ಮೇಲ್ಕಂಡ ಎಲ್ಲಾ ಮಾಹಿತಿಯನ್ನು ಸಂಪೂರ್ಣವಾಗಿ ಓದಿ ತಿಳಿದುಕೊಂಡು ನಿಗದಿತ ಅರ್ಜಿ ನಮೂನೆಯಲ್ಲಿ ಎಲ್ಲಾ ಕಾಲಂಗಳನ್ನು ಸಮರ್ಪಕ ಉತ್ತರಗಳಿಂದ ಭರ್ತಿ ಮಾಡತಕ್ಕದ್ದು.

2. ಈ ಅಧಿಸೂಚನೆಯಲ್ಲಿ ಲಗತ್ತಿಸಿದ ನಿಗದಿತ ಅರ್ಜಿ ನಮೂನೆಯಲ್ಲಿ ಬೆರಳಚ್ಚು ಮಾಡಿಸಿದ ಅಥವಾ ಗಣಕೀಕೃತ ಅರ್ಜಿಯನ್ನು ತನ್ನ ಕೈ ಬರವಣಿಗೆಯಲ್ಲಿ ಭರ್ತಿ ಮಾಡಿ ಸಲ್ಲಿಸತಕ್ಕದ್ದು. ಸರಿಯಾಗಿ ಅಂಕಣಗಳನ್ನು ಭರ್ತಿಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3. ಅರ್ಜಿಯನ್ನು ಕಳುಹಿಸುವ ಲಕೋಟೆಯ ಮೇಲೆ ಹಾಗೂ ಅರ್ಜಿ ನಮೂನೆಯಲ್ಲಿ ಶೀಘ್ರಲಿಪಿಗಾರ ಹುದ್ದೆಗೆ ಅರ್ಜಿ ಸಲ್ಲಿಸುವವರು "ಶೀಘ್ರಲಿಪಿಗಾರ ಹುದ್ದೆಗಾಗಿ ಅರ್ಜಿ" ಎಂದೂ, ಬೆರಳಚ್ಚುಗಾರ ಹುದ್ದೆಗೆ ಅರ್ಜಿ ಸಲ್ಲಿಸುವವರು "ಬೆರಳಚ್ಚುಗಾರ ಹುದ್ದೆಗಾಗಿ ಅರ್ಜಿ" ಎಂದೂ, ಬೆರಳಚ್ಚು - ನಕಲುಗಾರ ಹುದ್ದೆಗೆ ಅರ್ಜಿ ಸಲ್ಲಿಸುವವರು "ಬೆರಳಚ್ಚು - ನಕಲುಗಾರ ಹುದ್ದೆಗಾಗಿ ಅರ್ಜಿ" ಎಂದೂ, ಆದೇಶ ಜಾರಿಕಾರರ ಹುದ್ದೆಗೆ ಅರ್ಜಿ ಸಲ್ಲಿಸುವವರು "ಆದೇಶ ಜಾರಿಕಾರರ ಹುದ್ದೆಗಾಗಿ ಅರ್ಜಿ" ಎಂದೂ ಮತ್ತು ಸೇವಕರ ಹುದ್ದೆಗೆ ಅರ್ಜಿ ಸಲ್ಲಿಸುವವರು "ಸೇವಕರ ಹುದ್ದೆಗಾಗಿ ಅರ್ಜಿ" ಎಂದೂ ಕಡ್ಡಾಯವಾಗಿ ನಮೂದಿಸುವುದು.

4. ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಹಾಕಲು ಬಯಸುವವರು ಆಯಾ ಹುದ್ದೆಗಳಿಗೆ ಪ್ರತ್ಯೇಕವಾಗಿ ನಿಗದಿತ ಅರ್ಜಿ ನಮೂನೆಗಳಲ್ಲಿ ಅರ್ಜಿ ಸಲ್ಲಿಸತಕ್ಕದ್ದು.

5. ಒಂದೇ ಅರ್ಜಿಯಲ್ಲಿ ಒಂದಕ್ಕಿಂತ ಹೆಚ್ಚಿನ ಹುದ್ದೆ ಅಥವಾ ಮೀಸಲಾತಿಯನ್ನು ಕೋರಿದ್ದಲ್ಲಿ, ಅಂತಹ ಅರ್ಜಿಗಳನ್ನು ಯಾವುದೇ ಕಾರಣವಿಲ್ಲದೇ ತಿರಸ್ಕರಿಸಲಾಗುವುದು.

6. ಅಭ್ಯರ್ಥಿಯು ಇತ್ತೀಚಿನ ಪಾಸ್‌ಪೋರ್ಟ್ ಸೈಜ್ ಫೋಟೋವನ್ನು ಅರ್ಜಿ ನಮೂನೆಯಲ್ಲಿ ತೋರಿಸಿರುವ ಜಾಗದಲ್ಲಿ ಅಂಟಿಸಿ ಅದರ ಮೇಲೆ ಸಹಿ ಮಾಡತಕ್ಕದ್ದು.

7. ಅರ್ಜಿ ನಮೂನೆಯೊಂದಿಗೆ ಸಲ್ಲಿಸಬೇಕಾಗಿರುವ ಶೈಕ್ಷಣಿಕ ವಿದ್ಯಾರ್ಹತೆಯ ಅಂಕಪಟ್ಟಿಗಳನ್ನು ಹಾಗೂ ಇತರೆ ಪ್ರಮಾಣ ಪತ್ರಗಳನ್ನು ಸ್ವಯಂ ದೃಢೀಕರಿಸಿ ಸಹಿ ಮಾಡತಕ್ಕದ್ದು. (ಅರ್ಜಿಯಲ್ಲಿ ಮಾಡುವ ಸಹಿ ಹಾಗೂ ದಾಖಲೆಗಳ ಮೇಲೆ ಸ್ವಯಂ ದೃಢೀಕರಿಸಿ ಮಾಡುವ ಸಹಿಯು ಒಂದೇ ರೀತಿಯಲ್ಲಿ ಇರತಕ್ಕದ್ದು) ಅರ್ಜಿಯೊಂದಿಗೆ ಮೂಲ ಪ್ರತಿಗಳನ್ನು ಲಗತ್ತಿಸುವ ಅವಶ್ಯಕತೆ ಇರುವುದಿಲ್ಲ. ಲಗತ್ತಿಸಿದ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸುವ ದಿನಾಂಕದ ಒಳಗೆ ಪಡೆದಿರಬೇಕು. ಸ್ವಯಂ ದೃಢೀಕರಣವಿಲ್ಲದೆ ಸಲ್ಲಿಸಿರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

8. ಅಪೂರ್ಣ ಅರ್ಜಿಗಳನ್ನು ಯಾವ ಪತ್ರ ವ್ಯವಹಾರಕ್ಕೂ ಅವಕಾಶ ನೀಡದೆ ತಿರಸ್ಕರಿಸಲಾಗುವುದು.

9. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

## ಇತರೆ ಸೂಚನೆಗಳು :

1. ಅಭ್ಯರ್ಥಿಗಳು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅನುಸರಿಸುವುದು ಕಂಡು ಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.
2. ಅಪೂರ್ಣವಾಗಿರುವ, ಸಹಿ ಮಾಡದ ಮತ್ತು ವಿದ್ಯಾರ್ಹತೆ, ಮೀಸಲಾತಿ ಹಾಗೂ ವಯೋಮಿತಿ ರಿಯಾಯಿತಿ ಬಗ್ಗೆ ಸಂಬಂಧಪಟ್ಟ ದಾಖಲೆಗಳನ್ನು ಹೊಂದಿರದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
3. ಸರ್ಕಾರಿ ಮತ್ತು ಅರೆ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರಗಳನ್ನು ಪಡೆದು ಅರ್ಜಿ ಜೊತೆ ಲಗತ್ತಿಸಿ ಸಲ್ಲಿಸಬೇಕು.
4. ಅರ್ಜಿದಾರರು ಯಾವ ಹುದ್ದೆಗಳಿಗೆ ಅರ್ಜಿಗಳನ್ನು ಸಲ್ಲಿಸುತ್ತಿದ್ದಾರೆಂಬುದನ್ನು ದಪ್ಪ ಅಕ್ಷರಗಳಲ್ಲಿ ಲಕೋಟೆಯ ಮೇಲೆ ಹುದ್ದೆಯ ಹೆಸರನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.
5. ಅಭ್ಯರ್ಥಿಗಳು ತಮ್ಮ ಅರ್ಜಿಯೊಂದಿಗೆ 5-00 ರೂಪಾಯಿ ಅಂಚೆ ಮುದ್ರಾಂಕ (ಪೋಸ್ಟಲ್ ಸ್ಟ್ಯಾಂಪ್) ವನ್ನು ಹೊಂದಿರುವ ಸ್ವ - ವಿಳಾಸದ ಲಕೋಟೆಯನ್ನು ಸಲ್ಲಿಸತಕ್ಕದ್ದು.
6. ಅಭ್ಯರ್ಥಿಗೆ ಸಂದರ್ಶನಕ್ಕೆ ಹಾಜರಾಗಲು ಮಾಹಿತಿ ಸಿಗದಿದ್ದ ಪಕ್ಷದಲ್ಲಿ ಅವರು ಸಂದರ್ಶನಕ್ಕೆ ಹಾಜರಾಗಲು ಅನರ್ಹರೆಂದು ತಿಳಿಯತಕ್ಕದ್ದು. ಈ ಬಗ್ಗೆ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸಲು ಆಸ್ಪದವಿರುವುದಿಲ್ಲ.
7. ವಿವರಗಳನ್ನು ಕಾಲಂಗಳಲ್ಲಿ ಭರ್ತಿ ಮಾಡಿ ಬರೆದು ಅರ್ಜಿಗಳನ್ನು ಅಂಚೆ ಮೂಲಕ ಸಲ್ಲಿಸುವುದು ಅಥವಾ ಖುದ್ದಾಗಿ ತಂದು ಸಲ್ಲಿಸಿದಲ್ಲಿ ಈ ಕಛೇರಿಯ ವೇಳೆಯಲ್ಲಿ ಮಾತ್ರ ಸ್ವೀಕರಿಸಲಾಗುವುದು.
8. ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ / ಕೇಂದ್ರ / ಸ್ಥಳೀಯ ಸಂಸ್ಥೆ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ / ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ವಜಾ ಮಾಡಲ್ಪಟ್ಟದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗುತ್ತಾರೆ.
9. ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ. ಹಾಗೂ ಕಾನೂನು ಕ್ರಮ ಜರುಗಿಸಲಾಗುವುದು.

10. ಅಭ್ಯರ್ಥಿಗಳ ಆಯ್ಕೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

11. ಪಿಂಚಣಿ ಸೌಲಭ್ಯ : ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ(ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ 31.03.2006 ರಂತೆ.

12. ಕೊನೆಯ ದಿನಾಂಕದ ನಂತರ ಸಲ್ಲಿಸಲಾದ ಯಾವುದೇ ಅರ್ಜಿಗಳನ್ನು ಮತ್ತು ಅಂಚೆ ಮೂಲಕ ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

13. ಮೇಲ್ಕಂಡ ಹುದ್ದೆಗಳ ಸಂಖ್ಯೆ ಬದಲಾವಣೆಗೊಳ್ಳುವ ಸಂಭವವಿರುತ್ತದೆ.

(ಜಿ. ಬಸವರಾಜ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಾಮರಾಜನಗರ.

ಪ್ರತಿಯನ್ನು ಮಾನ್ಯ ಮಹಾ ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ (ಪತ್ರದೊಂದಿಗೆ) ಸಲ್ಲಿಸಲಾಗಿದೆ.

ಪ್ರತಿಯನ್ನು :

1. ರಾಜ್ಯದ ಎಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಗಳ (ಆಡಳಿತ) ಇವರಿಗೆ ತಮ್ಮ ಸೂಚನಾ ಫಲಕದಲ್ಲಿ ಪ್ರಕಟಿಸಲು ವಿನಂತಿ. ಪ್ರಧಾನ ನಗರ ಸಿವಿಲ್ ಮತ್ತು ಸತ್ರ ನ್ಯಾಯಾಧೀಶರು, ನಗರ ಸಿವಿಲ್ ಮತ್ತು ಸತ್ರ ನ್ಯಾಯಾಲಯ, ಬೆಂಗಳೂರು ನಗರ, ಪ್ರಧಾನಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ, ಬಾಗಲಕೋಟೆ, ಬೆಳಗಾಂ, ಬಳ್ಳಾರಿ, ಬೀದರ್, ಬಿಜಾಪುರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಕ್ಷಿಣ ಕನ್ನಡ (ಮಂಗಳೂರು), ದಾವಣಗೆರೆ, ಧಾರವಾಡ , ಗದಗ, ಗುಲ್ಬರ್ಗಾ, ಹಾವೇರಿ, ಕೊಪ್ಪಳ, ಕೊಡಗು (ಮಡಕೇರಿ), ಮಂಡ್ಯ ಮೈಸೂರು, ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉಡುಪಿ , ಉತ್ತರ ಕನ್ನಡ (ಕಾರವಾರ), ಯಾದಗಿರಿ. ಕೋಲಾರ, ಹಾಸನ.

2. ವಾರ್ತಾಧಿಕಾರಿಗಳು, ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಚಾಮರಾಜನಗರ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.

3. ಈ ಜಿಲ್ಲೆಯ ಎಲ್ಲಾ ಪೀಠಾಸೀನಾಧಿಕಾರಿಗಳು (ಆಡಳಿತ) ಇವರಿಗೆ ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು.

4. ಕರ್ನಾಟಕ ರಾಜ್ಯ ಗೆಜೆಟ್ ಪ್ರಕಟಣೆಗಾಗಿ : ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ಸರ್ಕಾರಿ ಹೊರವಲಯ ಮತ್ತು ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು-560059.

5. ಉದ್ಯೋಗಾಧಿಕಾರಿಗಳು, ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಚಾಮರಾಜನಗರ.

6. ನಿರ್ದೇಶಕರು, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು – ಇವರಿಗೆ ರಾಜ್ಯಾದ್ಯಂತ ವ್ಯಾಪಕ ಪ್ರಚಾರದಲ್ಲಿರುವ ಎರಡು ದಿನ ಪತ್ರಿಕೆಗಳಲ್ಲಿ ಪ್ರಕಟಿಸುವಂತೆ ಕೋರಿ.

7. ಈ ನ್ಯಾಯಾಲಯದ ಸೂಚನಾ ಫಲಕಕ್ಕೆ.

# ಅರ್ಜಿ ನಮೂನೆ

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಚಾಮರಾಜನಗರ.

ಇತ್ತೀಚಿನ ಭಾವಚಿತ್ರ ಲಗತ್ತಿಸಿ ಸಹಿ ಮಾಡುವುದು

ಮಾನ್ಯರೇ,

ಚಾಮರಾಜನಗರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಪ್ರಕಟಣೆ ಸಂಖ್ಯೆ: ಎಡಿಎಂಎನ್/ ............... ದಿನಾಂಕ: ................. ಪ್ರಕಾರ ............................................... ಹುದ್ದೆಗೆ ನಾನು ಈ ಮೂಲಕ ನನ್ನ ವಿವರದೊಂದಿಗೆ ಅರ್ಜಿ ಸಲ್ಲಿಸಿರುತ್ತೇನೆ.

| | | |
|---|---|---|
| 1 | ಅಭ್ಯರ್ಥಿಯ ಪೂರ್ಣ ಹೆಸರು (ಎಸ್.ಎಸ್.ಎಲ್.ಸಿ. ಅಂಕಪಟ್ಟಿಯಲ್ಲಿರುವಂತೆ) | |
| 2 | ತಂದೆಯ / ತಾಯಿಯ / ಗಂಡನ ಹೆಸರು | |
| 3 | ಪೂರ್ಣ ವಿಳಾಸ, ದೂರವಾಣಿ / ಮೊಬೈಲ್ ಸಂಖ್ಯೆಯೊಂದಿಗೆ : | |
| 4 | ಜನ್ಮ ದಿನಾಂಕ :<br>ವಯಸ್ಸು : | |
| 5 | ಲಿಂಗ | ಪುರುಷ / ಮಹಿಳೆ |
| 6 | ಕೋರಿರುವ ಮೀಸಲಾತಿ : (ಅಧಿಸೂಚನೆಯಲ್ಲಿ ಆಯಾಯ ಹುದ್ದೆಗಳ ಮುಂದೆ ತಿಳಿಸಿರುವ ಮೀಸಲಾತಿಯಂತೆಯೇ ನಮೂದಿಸತಕ್ಕದ್ದು) | |
| 7 | ವಯೋಮಿತಿ ಸಡಿಲಿಕೆ ಅಪೇಕ್ಷಿಸಿದ್ದಲ್ಲಿ ಹಾಜರುಪಡಿಸಿರುವ ದಾಖಲೆ : | |
| 8 | ರಾಷ್ಟ್ರೀಯತೆ :<br>ಧರ್ಮ : | |
| 9 | ವಿವಾಹಿತರಾಗಿದ್ದರೆ ಗಂಡ ಅಥವಾ ಹೆಂಡತಿಯ ಹೆಸರು. | |
| 10 | ವಿವಾಹಿತರಾದಲ್ಲಿ ಒಬ್ಬರಿಗಿಂತ ಹೆಚ್ಚು ಜೀವಂತ ಗಂಡ ಅಥವಾ ಹೆಂಡತಿ ಇದ್ದಾರೆಯೇ? | |
| 11 | ನೀವು ಯಾವುದಾದರೂ ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿದ್ದೀರ? | |
| 12 | ಪ್ರಸ್ತುತ ಸರ್ಕಾರಿ ಸೇವೆಯಲ್ಲಿರುವಿರೆ? ಇದ್ದಲ್ಲಿ ವಿವರಣೆ (ಇಲಾಖೆಯ ಹೆಸರು, ಹುದ್ದೆಯ ಪದನಾಮ, ಸೇವಾ ಅವಧಿ. | |

| | | | | | |
|---|---|---|---|---|---|
| 13 | ನೀವು ಸರ್ಕಾರಿ ಸೇವೆಯಿಂದ ಅಥವಾ ಇನ್ನಾವುದಾದರು ಸೇವೆಯಿಂದ ವಜಾ ಆಗಿದ್ದೀರ ಅಥವಾ ತೆಗೆದುಹಾಕಲ್ಪಟ್ಟಿದ್ದೀರ? | | | | |
| 14 | ಶೈಕ್ಷಣಿಕ ವಿದ್ಯಾರ್ಹತೆಯ ವಿವರಗಳು : ( ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು) | | | | |
| | ಉತ್ತೀರ್ಣ ಹೊಂದಿದ ಪರೀಕ್ಷೆಗಳು | ಉತ್ತೀರ್ಣ ಹೊಂದಿದ ವರ್ಷ ಮತ್ತು ನೊಂದಣಿ ಸಂಖ್ಯೆ: | ಗರಿಷ್ಠ ಅಂಕಗಳು | ಪಡೆದಿರುವ ಅಂಕಗಳು | ಶೇಕಡಾವಾರು ಅಂಕಗಳು |
| ಎ | ಎಸ್.ಎಸ್.ಎಲ್.ಸಿ. / ತತ್ಸಮಾನ ಪರೀಕ್ಷೆ | | | | |
| ಬಿ | ಕಿರಿಯ ದರ್ಜೆಯ ಕನ್ನಡ ಬೆರಳಚ್ಚು ಪರೀಕ್ಷೆ | | | | |
| ಸಿ | ಕಿರಿಯ ದರ್ಜೆಯ ಆಂಗ್ಲ ಬೆರಳಚ್ಚು ಪರೀಕ್ಷೆ | | | | |
| ಡಿ | ಹಿರಿಯ ದರ್ಜೆಯ ಕನ್ನಡ ಬೆರಳಚ್ಚು ಪರೀಕ್ಷೆ | | | | |
| ಇ | ಹಿರಿಯ ದರ್ಜೆಯ ಆಂಗ್ಲ ಬೆರಳಚ್ಚು ಪರೀಕ್ಷೆ | | | | |
| ಎಫ್ | ಹಿರಿಯ ದರ್ಜೆಯ ಕನ್ನಡ ಶೀಘ್ರಲಿಪಿ ಪರೀಕ್ಷೆ | | | | |
| ಜಿ | ಹಿರಿಯ ದರ್ಜೆಯ ಆಂಗ್ಲ ಶೀಘ್ರಲಿಪಿ ಪರೀಕ್ಷೆ | | | | |
| 15 | ವಾಹನ ಪರವಾನಗಿ ಹೊಂದಿದ್ದಲ್ಲಿ ಅದರ ವಿವರ (ಆದೇಶ ಜಾರಿಕಾರರ ಹುದ್ದೆಗೆ ಅರ್ಜಿ ಸಲ್ಲಿಸುವವರಿಗೆ ಮಾತ್ರ) | | | | |
| 16 | ಕಂಪ್ಯೂಟರ್ ತರಬೇತಿಯನ್ನು ಪಡೆದಿದ್ದಲ್ಲಿ ಪ್ರಮಾಣ ಪತ್ರಗಳನ್ನು ಲಗತ್ತಿಸುವುದು. | | | | |

ಸೂಚನೆ : ಅಭ್ಯರ್ಥಿಯು ತನಗೆ ಅನ್ವಯವಾಗದ್ದನ್ನು "ಅನ್ವಯಿಸುವುದಿಲ್ಲ" ಎಂದು ನಮೂದಿಸುವುದು ಹಾಗೂ ಯಾವುದೇ ಅಂಕಣವನ್ನು ಖಾಲಿ ಬಿಡುವಂತಿಲ್ಲ.

## ಘೋಷಣೆ

ಈ ಮೇಲೆ ನಮೂದಿಸಿರುವ ಮಾಹಿತಿ ಮತ್ತು ವಿವರಗಳು ನನಗೆ ತಿಳಿದ ಮಟ್ಟಿಗೆ ಸತ್ಯವಾಗಿದ್ದು ಹಾಗೂ ಒಂದು ವೇಳೆ ಅವು ಅಸತ್ಯವೆಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತನವನ್ನು ಬಿಟ್ಟು ಬಿಡಲು ನಾನು ಬದ್ಧನಾಗಿರುತ್ತೇನೆ / ಬದ್ಧಳಾಗಿರುತ್ತೇನೆ. ನಾನು ಆಯ್ಕೆಗೊಂಡರೆ ಚಾಮರಾಜನಗರ ಜಿಲ್ಲಾ ನ್ಯಾಯಾಂಗ ಘಟಕದ ಯಾವುದೇ ನ್ಯಾಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸಲು ಸಿದ್ಧನಿದ್ದೇನೆ / ಸಿದ್ಧಳಿದ್ದೇನೆ.

ಸ್ಥಳ :
ದಿನಾಂಕ :

ಅಭ್ಯರ್ಥಿಯ ಸಹಿ